**All India Radio: Bangalore**
**National Bulletin In Kannada**
**05.07.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**05.07.2026 7.35 am**

**<>><><*><><<>**

ಮುಖ್ಯಾಂಶಗಳು

**೧. ಭಾರತ -ಅಮೆರಿಕ ದೇಶಗಳು ಕಾರ್ಯತಂತ್ರದ ಪಾಲುದಾರಿಕೆಗಿಂತ ಹೆಚ್ಚಿನ ಸಾಧನೆ ಮಾಡಿವೆ - ಪ್ರಧಾನಿ ನರೇಂದ್ರ ಮೋದಿ**

**೨. ಎಥೆನಾಲ್ ಹೊಸ ಪರಿಕಲ್ಪನೆಯಲ್ಲ; ಜೈವಿಕ ಇಂಧನ ಮಿಶ್ರಣ ಕಾರ್ಯಕ್ರಮದ ತಿದ್ದುಪಡಿಗೆ ಸರ್ಕಾರ ಬದ್ಧ - ಸಚಿವ ಹರ್ದೀಪ್ ಸಿಂಗ್ ಪುರಿ**

**೩. ಇಂದಿನಿಂದ ಕತಾರ್, ಬಹ್ರೇನ್, ಕುವೈತ್ ಮತ್ತು ಓಮನ್‌ಗೆ ಭೇಟಿ ನೀಡಲಿರುವ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್**

**೪. ಫಿಫಾ ವಿಶ್ವಕಪ್ ಫುಟ್‌ಬಾಲ್; ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ ಫ್ರಾನ್ಸ್, ಮೊರಾಕೊ**

**೫. ಟಿ-೨೦ ಕ್ರಿಕೆಟ್; ಭಾರತ ವಿರುದ್ಧ ಇಂಗ್ಲೆಂಡ್‌ಗೆ ೪ ವಿಕೆಟ್‌ಗಳ ಜಯ**

**<>><><*><><<>**

ಭಾರತ ಮತ್ತು ಅಮೆರಿಕ ದೇಶಗಳು ಕಾರ್ಯತಂತ್ರದ ಪಾಲುದಾರಿಕೆಗಿಂತ ಹೆಚ್ಚಿನ ಸಾಧನೆ ಮಾಡಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಅಮೆರಿಕದ ಜನರಿಗೆ ಅಮೆರಿಕದ ೨೫೦ನೇ ಸ್ವಾತಂತ್ರ್ಯೋತ್ಸವದ ಶುಭಾಶಯಗಳನ್ನು ಅವರು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಇದು ಪ್ರಜಾಪ್ರಭುತ್ವದಲ್ಲಿ ಹಂಚಿಕೆಯ ಹಕ್ಕು, ಕಾನೂನಿನ ಆಳ್ವಿಕೆ ಮತ್ತು ಜನರ ಅಪರಿಮಿತ ಸಾಮರ್ಥ್ಯದಿಂದ ಬೆಂಬಲಿತವಾಗಿದೆ. ಮುಂದಿನ ೨೫೦ ವರ್ಷಗಳು ಭಾರತ-ಅಮೆರಿಕ ಪಾಲುದಾರಿಕೆಯನ್ನು ಹೊಸ ಎತ್ತರಕ್ಕೆ ಕೊಂಡೊಯ್ಯುವಾಗ ಅಮೆರಿಕಕ್ಕೆ ಹೆಚ್ಚಿನ ಸಮೃದ್ಧಿ, ಶಾಂತಿ ಮತ್ತು ಪ್ರಗತಿಯನ್ನು ತರಲಿ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<>><><*><><<>**

ಎಥೆನಾಲ್ ಹೊಸ ಪರಿಕಲ್ಪನೆಯಲ್ಲ. ಇದು ಒಂದು ಶತಮಾನಕ್ಕೂ ಹೆಚ್ಚು ಕಾಲದಿಂದ ಬಳಕೆಯಲ್ಲಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ರಾಜಸ್ಥಾನದಲ್ಲಿ ಮಾತನಾಡಿದ ಹರ್ದೀಪ್ ಸಿಂಗ್ ಪುರಿ, ಸರ್ಕಾರದ ಜೈವಿಕ ಇಂಧನ ಮಿಶ್ರಣ ಕಾರ್ಯಕ್ರಮದ ಬಗ್ಗೆ ರಚನಾತ್ಮಕ ಟೀಕೆಗಳನ್ನು ಸರ್ಕಾರ ಸ್ವಾಗತಿಸುತ್ತದೆ. ಸಲಹೆಗಳನ್ನು ಸ್ವೀಕರಿಸಿ, ಅಗತ್ಯ ತಿದ್ದುಪಡಿಗಳನ್ನು ಮಾಡುತ್ತದೆ ಎಂದರು. ಭಾರತದಲ್ಲಿ ಎಥೆನಾಲ್ ಮಿಶ್ರಣದ ಕಲ್ಪನೆಯನ್ನು ಮೊದಲು ಹಿಂದಿನ ಕಾಂಗ್ರೆಸ್ ನೇತೃತ್ವದ ಸರ್ಕಾರದ ಅವಧಿಯಲ್ಲಿ ಪ್ರಾರಂಭಿಸಲಾಯಿತು ಎಂದು ಅವರು ಹೇಳಿದರು.

**<>><><*><><<>**

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದಿನಿಂದ ಇದೇ ೧೦ ರವರೆಗೆ ಕತಾರ್, ಬಹ್ರೇನ್, ಕುವೈತ್ ಮತ್ತು ಓಮನ್‌ಗೆ ಭೇಟಿ ನೀಡಲಿದ್ದಾರೆ. ಪ್ರವಾಸದ ಸಂದರ್ಭದಲ್ಲಿ ಈ ದೇಶಗಳೊಂದಿಗೆ ಭಾರತದ ದ್ವಿಪಕ್ಷೀಯ ಸಂಬಂಧಗಳನ್ನು ವೃದ್ಧಿಸುವ ಮತ್ತು ಪ್ರಾದೇಶಿಕ ಬೆಳವಣಿಗೆಗಳು, ಪರಸ್ಪರ ಆಸಕ್ತಿಯ ವಿಷಯಗಳ ಕುರಿತು ವಿಚಾರ ವಿನಿಮಯಕ್ಕೆ ವೇದಿಕೆ ಸಜ್ಜಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಓಮನ್‌ಗೆ ಭೇಟಿ ನೀಡಿದ ನಂತರ, ಡಾ.ಜೈಶಂಕರ್, ಇದೇ ೧೩ ರಂದು ನ್ಯೂಯಾರ್ಕ್‌ಗೆ ತೆರಳಲಿದ್ದು, ೨೦೨೮-೨೯ ರ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಅವಧಿ ಕುರಿತು ಭಾರತದ ನಿಲುವನ್ನು ಪ್ರತಿಪಾದಿಸಲಿದ್ದಾರೆ. ನಂತರ ಅವರು, ೩ನೇ ಭಾರತ-ಯುರೋಪ್ ಒಕ್ಕೂಟದ ವ್ಯಾಪಾರ ಮತ್ತು ತಂತ್ರಜ್ಞಾನ ಮಂಡಳಿಯ ಸಭೆಯಲ್ಲಿ ಭಾಗಿಯಾಗಲಿದ್ದಾರೆ. ಇದೇ ೧೪ ಮತ್ತು ೧೫ ರಂದು ಬ್ರಸೆಲ್ಸ್‌ನಲ್ಲಿ ಯುರೋಪಿಯನ್ ಒಕ್ಕೂಟ ಮತ್ತು ಬೆಲ್ಜಿಯಂ ಸಹವರ್ತಿಗಳೊಂದಿಗೆ ಚರ್ಚಿಸಲಿದ್ದಾರೆ.

**<>><><*><><<>**

ಸಂಸತ್ತಿನ ಮುಂಗಾರು ಅಧಿವೇಶನ, ಈ ತಿಂಗಳ ೨೦ ರಿಂದ ಆರಂಭವಾಗಲಿದ್ದು, ಆಗಸ್ಟ್ ೧೩ ರವರೆಗೆ ಮುಂದುವರಿಯಲಿದೆ. ಸಂಸತ್ ಅಧಿವೇಶನವನ್ನು ಕರೆಯುವ ಸರ್ಕಾರದ ಪ್ರಸ್ತಾಪಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅನುಮೋದನೆ ನೀಡಿದ್ದಾರೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಮುಂಬರುವ ಈ ಅಧಿವೇಶನ, ರಾಷ್ಟ್ರೀಯ ಪ್ರಾಮುಖ್ಯತೆಯ ವಿವಿಧ ಪ್ರಮುಖ ವಿಷಯಗಳ ಕುರಿತು ಅರ್ಥಪೂರ್ಣ ಸಂವಾದ, ಸುದೀರ್ಘ ಚರ್ಚೆ ಹಾಗೂ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಸಂಸತ್ ಅಧಿವೇಶನ ಗಮನಹರಿಸಲಿದೆ ಎಂದು ಸಚಿವ ಕಿರಣ್ ರಿಜಿಜು ತಿಳಿಸಿದ್ದಾರೆ.

<>><><*><><<>

"ಏಕ್ ಭಾರತ್, ಶ್ರೇಷ್ಠ ಭಾರತ್" ಎಂಬ ಧ್ಯೇಯವಾಕ್ಯದಡಿಯಲ್ಲಿ ನಡೆದ ಸೋಮನಾಥ ಸ್ವಾಭಿಮಾನ ಯಾತ್ರೆಯಲ್ಲಿ ಪಾಲ್ಗೊಂಡಿದ್ದ ಯಾತ್ರಿಕರು ಜಮ್ಮು ಮತ್ತು ಕಾಶ್ಮೀರದ ಜಮ್ಮುವಿನ ತಾವಿ ರೈಲು ನಿಲ್ದಾಣಕ್ಕೆ ತಲುಪಿದ್ದಾರೆ. ಗುಜರಾತ್‌ನಿಂದ ಆರಂಭವಾದ ಆರು ದಿನಗಳ ಯಾತ್ರೆಯು, ಯಶಸ್ವಿಯಾಗಿ ಸಂಪನ್ನಗೊಂಡಿದೆ. ಜಮ್ಮು ಮತ್ತು ಕಾಶ್ಮೀರದ ಸಂಸ್ಕೃತಿ ಇಲಾಖೆ, ಜಮ್ಮು ಮತ್ತು ಕಾಶ್ಮೀರ ಕಲೆ, ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಸಹಯೋಗದೊಂದಿಗೆ ಆಯೋಜಿಸಿದ್ದ ಈ ಯಾತ್ರೆಯಲ್ಲಿ ಯಾತ್ರಿಕರಿಗೆ ಶ್ರೀ ಸೋಮನಾಥ ಮಹಾದೇವ ದೇವಸ್ಥಾನ ಮತ್ತು ಗುಜರಾತ್‌ನಾದ್ಯಂತ ಹಲವಾರು ಧಾರ್ಮಿಕ, ಐತಿಹಾಸಿಕ ಮತ್ತು ಸಾಂಸ್ಕೃತಿಕ ತಾಣಗಳನ್ನು ಭೇಟಿ ಮಾಡಲು ಅವಕಾಶ ಮಾಡಿಕೊಟ್ಟಿತು. ಯಾತ್ರಾರ್ಥಿಗಳು ಶಾಂತಿ, ಸಾಮರಸ್ಯ, ಸಮೃದ್ಧಿ, ರಾಷ್ಟ್ರೀಯ ಏಕತೆ ಮತ್ತು ದೇಶದ ಜನರ ಯೋಗಕ್ಷೇಮಕ್ಕಾಗಿ ಪ್ರಾರ್ಥನೆ ಸಲ್ಲಿಸಿದರು. ಯಾತ್ರಿಕರನ್ನು ಹೊತ್ತ ವಿಶೇಷ ರೈಲು ಅಹಮದಾಬಾದ್‌ನ ಸಬರಮತಿ ರೈಲು ನಿಲ್ದಾಣದಿಂದ ತನ್ನ ಯಾತ್ರೆಯನ್ನು ಆರಂಭಿಸಿತು.

<>><><*><><<>

ಈರುಳ್ಳಿ ಬೆಳೆಗಾರರ ಹಿತದೃಷ್ಟಿಯಿಂದ ಕೇಂದ್ರ ಸರ್ಕಾರ ಈರುಳ್ಳಿ ಖರೀದಿ ಬೆಲೆಯನ್ನು ಕ್ವಿಂಟಾಲ್‌ಗೆ ಒಂದು ಸಾವಿರದ ೮೭೫ ರೂಪಾಯಿಗಳಿಂದ ಎರಡು ಸಾವಿರದ ೧೨೫ ರೂಪಾಯಿಗಳಿಗೆ ಹೆಚ್ಚಿಸಿದೆ. ಶೇಕಡಾ ೧೩ ರಷ್ಟು ದರ ಹೆಚ್ಚಳವಾಗಿದೆ. ಮಹಾರಾಷ್ಟ್ರ, ಮಧ್ಯಪ್ರದೇಶ ಮತ್ತು ಗುಜರಾತ್‌ನಲ್ಲಿ ಪ್ರಸ್ತುತ ಈರುಳ್ಳಿ ದಾಸ್ತಾನು ಸಮರ್ಪಕವಾಗಿದೆ. ಚಿಲ್ಲರೆ ಮಾರುಕಟ್ಟೆಯಲ್ಲಿ ಈರುಳ್ಳಿ ಬೆಲೆ ಪ್ರತಿ ಕೆ.ಜಿಗೆ ೨೧ ರೂಪಾಯಿ ನಿಗದಿ ಮಾಡಲಾಗಿದೆ. ಈ ವರ್ಷದ ಜೂನ್‌ನಲ್ಲಿ ಸುಮಾರು ಒಂದು ಲಕ್ಷ ೫೦ ಸಾವಿರ ಮೆಟ್ರಿಕ್ ಟನ್ ಈರುಳ್ಳಿ ರಫ್ತು ಮಾಡಲಾಗಿದೆ.

<>><><*><><<>

ವೆನೆಜುವೆಲಾದಲ್ಲಿ ಕಳೆದ ವಾರ ಸಂಭವಿಸಿದ ಎರಡು ಭೂಕಂಪಗಳಲ್ಲಿ ಸಾವನ್ನಪ್ಪಿದವರ ಸಂಖ್ಯೆ ೨ ಸಾವಿರದ ೯೫೪ ಕ್ಕೆ ಏರಿಕೆಯಾಗಿದ್ದು, ೧೬ ಸಾವಿರದ ೫೯೨ ಮಂದಿ ಗಾಯಗೊಂಡಿದ್ದಾರೆ ಎಂದು ಅಧ್ಯಕ್ಷ ಜಾರ್ಜ್ ರೊಡ್ರಿಗಸ್ ತಿಳಿಸಿದ್ದಾರೆ. ಅರಾಗುವಾ, ಮಿರಾಂಡಾ ಮತ್ತು ಲಾ ಗುಯಿರಾ ಮತ್ತು ಪಶ್ಚಿಮ ರಾಜ್ಯಗಳಾದ ಕ್ಯಾರಬೊಬೊ, ಯಾರಾಕುಯ್ ಮತ್ತು ಫಾಲ್ಕನ್‌ನಲ್ಲಿ ಸಂಭವಿಸಿದ ದುರಂತದಲ್ಲಿ ೬, ಸಾವಿರದ ೪೬೨ ಜನರನ್ನು ರಕ್ಷಿಸಲಾಗಿದೆ ಎಂದು ರೊಡ್ರಿಗಸ್ ತಿಳಿಸಿದ್ದಾರೆ.

<>><><*><><<>

ಇಂಡೋನೇಷ್ಯಾಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರ ಭೇಟಿ ಹಿನ್ನೆಲೆ, ಬ್ರಹ್ಮೋಸ್ ಕ್ಷಿಪಣಿ ವ್ಯವಸ್ಥೆ ಖರೀದಿಗೆ ಸಂಬಂಧಿಸಿದಂತೆ ಪ್ರಕ್ರಿಯೆಗಳು ನಡೆಯುತ್ತಿವೆ. ಇಂಡೋನೇಷ್ಯಾ ಕ್ಷಿಪಣಿ ಖರೀದಿಗೆ ತೋರಿರುವ ಆಸಕ್ತಿಯ ಕುರಿತು ನಡೆಯುತ್ತಿರುವ ಮಾತುಕತೆ ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲೇ ಸ್ಪಷ್ಟ ಫಲಿತಾಂಶ ಹೊರಬರುವ ನಿರೀಕ್ಷೆಯಿದೆ ಎಂದು ಇಂಡೋನೇಷ್ಯಾದಲ್ಲಿರುವ ಭಾರತದ ರಾಯಭಾರಿ ಸಂದೀಪ್ ಚಕ್ರವರ್ತಿ ತಿಳಿಸಿದ್ದಾರೆ. ಐಎಎನ್‌ಎಸ್‌ಗೆ ನೀಡಿದ ಸಂದರ್ಶನದಲ್ಲಿ ಅವರು, ಬ್ರಹ್ಮೋಸ್ ಕ್ಷಿಪಣಿ ವ್ಯವಸ್ಥೆಗೆ ಸಂಬಂಧಿಸಿದ ಮಾತುಕತೆಗಳು ಸಾಕಷ್ಟು ಪ್ರಗತಿ ಸಾಧಿಸಿದ್ದು, ಶೀಘ್ರದಲ್ಲೇ ಅವು ಕಾರ್ಯರೂಪಕ್ಕೆ ಬರಲಿವೆ. ಭಾರತದಿಂದ ಇಂಡೋನೇಷ್ಯಾಕ್ಕೆ ರಕ್ಷಣಾ ಉಪಕರಣಗಳ ರಫ್ತು ಆರಂಭವಾಗುವ ವಿಶ್ವಾಸವಿದೆ ಎಂದು ಹೇಳಿದರು. ಪ್ರಧಾನಿ ಮೋದಿ ಅವರ ಭೇಟಿಯ ಸಂದರ್ಭದಲ್ಲಿ ಈ ಸಂಬಂಧ ಕೆಲವು ಮಹತ್ವದ ಬೆಳವಣಿಗೆಗಳು ನಿರೀಕ್ಷಿಸಲಾಗಿದೆ ಎಂದು ಸಂದೀಪ್ ಚಕ್ರವರ್ತಿ ಹೇಳಿದರು.

**<><><*><><<>**

ಫಿಲಡೆಲ್ಫಿಯಾದಲ್ಲಿ ನಡೆದ ಫಿಫಾ ವಿಶ್ವಕಪ್‌ನಲ್ಲಿ, ೧೬ನೇ ಸುತ್ತಿನ ಪಂದ್ಯದಲ್ಲಿ ಪರಾಗ್ವೆ ವಿರುದ್ಧ ೧-೦ ಅಂತರದ ಜಯ ಸಾಧಿಸುವ ಮೂಲಕ ಫ್ರಾನ್ಸ್ ಕ್ವಾರ್ಟರ್ ಫೈನಲ್‌ಗೆ ದಾಪುಗಾಲಿಟ್ಟಿದೆ. ೭೦ನೇ ನಿಮಿಷದಲ್ಲಿ ಫ್ರಾನ್ಸ್ ನಾಯಕ ಕೈಲಿಯನ್ ಎಂಬಾಪೆ ಪೆನಾಲ್ಟಿ ಸ್ಥಾನದಿಂದ ಪಂದ್ಯದ ಏಕೈಕ ಗೋಲು ಗಳಿಸಿದರು. ಫ್ರಾನ್ಸ್ ಈಗ ಕ್ವಾರ್ಟರ್ ಫೈನಲ್‌ನಲ್ಲಿ ಮೊರಾಕೊವನ್ನು ತಂಡವನ್ನು ಎದುರಿಸಲಿದೆ. ಇದಕ್ಕೂ ಮೊದಲು, ಟೆಕ್ಸಾಸ್‌ನ ಹೂಸ್ಟನ್‌ನಲ್ಲಿ ನಡೆದ ಪಂದ್ಯದಲ್ಲಿ ಕೆನಡಾ ವಿರುದ್ಧ ಮೊರಾಕೋ ೩-೦ ಅಂತರದ ಭರ್ಜರಿ ಜಯದೊಂದಿಗೆ ಕ್ವಾರ್ಟರ್ ಫೈನಲ್ಸ್ ಗೆ ತಲುಪಿತು. ಕಾನ್ಸಾಸ್ ಸಿಟಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಅಂತಿಮ ೩೨ನೇ ಸುತ್ತಿನ ಪಂದ್ಯದಲ್ಲಿ, ಕೊಲಂಬಿಯಾ, ಘಾನಾ ತಂಡದ ವಿರುದ್ಧ ೧-೦ ಗೋಲುಗಳ ಅಂತರದಿಂದ ಗೆದ್ದು ೧೬ನೇ ಸುತ್ತಿನಲ್ಲಿ ಸ್ಥಾನ ಪಡೆದುಕೊಂಡಿತು. ಕೊಲಂಬಿಯಾ ಈಗ ಕ್ವಾರ್ಟರ್ ಫೈನಲ್ಸ್ ಸ್ಥಾನಕ್ಕಾಗಿ ಮಾಡು ಇಲ್ಲವೆ ಮಡಿ ಪಂದ್ಯದಲ್ಲಿ ಸ್ವಿಟ್ಜರ್‌ಲ್ಯಾಂಡ್ ತಂಡವನ್ನು ಎದುರಿಸಲಿದೆ. ಮತ್ತೊಂದು ರೋಮಾಂಚಕಾರಿ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಗೆದ್ದ ಹಾಲಿ ಚಾಂಪಿಯನ್ ಅರ್ಜೆಂಟೀನಾ ಕೂಡ ೧೬ ರ ಸುತ್ತಿಗೆ ಮುನ್ನಡೆದಿದೆ. ಅರ್ಜೆಂಟೀನಾ ಮುಂದಿನ ಸುತ್ತಿನಲ್ಲಿ ಈಜಿಪ್ಟ್ ತಂಡವನ್ನು ಎದುರಿಸಲಿದೆ. ನಿಗದಿತ ಸಮಯ ಮತ್ತು ಹೆಚ್ಚುವರಿ ಸಮಯದ ನಂತರ ೧-೧ ಗೋಲುಗಳ ಅಂತರದಲ್ಲಿ ಡ್ರಾ ಆದ ನಂತರ ಪೆನಾಲ್ಟಿ ಶೂಟೌಟ್‌ನಲ್ಲಿ ಆಸ್ಟ್ರೇಲಿಯಾವನ್ನು ೪-೨ ಗೋಲುಗಳಿಂದ ಸೋಲಿಸಿದ ಅರ್ಜೆಂಟೀನಾ ಮತ್ತೊಮ್ಮೆ ಮಹತ್ವದ ಸಾಧನೆ ಮಾಡುವ ತವಕದಲ್ಲಿದೆ.

**<><><*><><<>**

ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫರ್ಡ್‌ನಲ್ಲಿ ನಿನ್ನೆ ನಡೆದ ಎರಡನೇ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಭಾರತವನ್ನು ಇಂಗ್ಲೆಂಡ್ ೪ ವಿಕೆಟ್‌ಗಳ ಅಂತರದಿಂದ ಸೋಲಿಸಿತು. ಮೊದಲು ಬ್ಯಾಟ್ ಮಾಡಿದ ಭಾರತ ತಂಡ ಇಂಗ್ಲೆಂಡ್‌ಗೆ ೧೯೧ ರನ್‌ಗಳ ಗೆಲುವಿನ ಗುರಿ ನೀಡಿತು. ಇದಕ್ಕೆ ಉತ್ತರವಾಗಿ, ಇಂಗ್ಲೆಂಡ್ ೧೯ ಓವರ್‌ಗಳಲ್ಲಿ ೬ ವಿಕೆಟ್ ಕಳೆದುಕೊಂಡು ಗೆಲುವಿನ ದಡ ಸೇರಿತು. ಮೊದಲು ಬ್ಯಾಟ್ ಮಾಡಿದ ಭಾರತ ನಿಗದಿತ ೨೦ ಓವರ್‌ಗಳಲ್ಲಿ ಏಳು ವಿಕೆಟ್‌ಗಳ ನಷ್ಟಕ್ಕೆ ೧೯೦ ರನ್‌ಗಳನ್ನು ಗಳಿಸಿತು. ಇಂಗ್ಲೆಂಡ್‌ನ ಜಾಕೋಬ್ ಬೆಥೆಲ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೂರನೇ ಟಿ-೨೦ ಪಂದ್ಯ ಮಂಗಳವಾರ ನಾಟಿಂಗ್‌ಹ್ಯಾಮ್‌ನ ಟ್ರೆಂಟ್ ಬ್ರಿಡ್ಜ್‌ನಲ್ಲಿ ನಡೆಯಲಿದೆ. ಇದಕ್ಕೂ ಮೊದಲು, ವೈಭವ್ ಸೂರ್ಯವಂಶಿ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ ಅತ್ಯಂತ ಕಿರಿಯ ಆಟಗಾರ ಎಂಬ ಇತಿಹಾಸ ಸೃಷ್ಟಿಸಿದರು. ವೈಭವ್ ೧೫ ವರ್ಷ ಮತ್ತು ೯೯ ದಿನಗಳಲ್ಲಿ ಚೊಚ್ಚಲ ಜಾಗತಿಕ ಕ್ರಿಕೆಟ್ ಲೋಕಕ್ಕೆ ಪ್ರವೇಶ ಮಾಡಿದ್ದಾರೆ. ೧೬ ವರ್ಷ ಮತ್ತು ೨೦೫ ದಿನಗಳಲ್ಲಿದ್ದಾಗ ಅಂತಾರಾಷ್ಟ್ರೀಯ ಪಂದ್ಯವಾಡಿದ ಸಚಿನ್ ತೆಂಡೂಲ್ಕರ್ ಅವರ ದೀರ್ಘಕಾಲದ ದಾಖಲೆಯನ್ನು ಸೂರ್ಯವಂಶಿ ಹಿಂದಿಕ್ಕಿದರು.

**<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**